3514 (4545) ಶ್ರೀ ಅನಿಲ್ ಹೆಚ್. ಲಾಡ್ (ಕೂಡ್ಲಿಗಿ) – ಮಾನ್ಯ ಜಲ ಸಂಪನ್ಮೂಲ ಮತ್ತು ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕೂಡ್ಲಗಿ ವಿಧಾನಸಭಾಕ್ಷೇತ್ರದ ಏತನೀರಾವರಿ ಯೋಜನೆಗೆ ನಿರ್ವಹಣಾ ಅನುದಾನವನ್ನು ಬಿಡುಗಡೆ ಮಾಡಲಾಗುವುದೇ ;

ಆ) ಹಾಗಿದ್ದಲ್ಲಿ ಯಾವಾಗ ಬಿಡುಗಡೆ ಮಾಡಲಾಗುವುದು ?

ಶ್ರೀ ಮಲ್ಲಿಕಾರ್ಜುನ ಖರ್ಗೆ (ಜಲ ಸಂಪನ್ಮೂಲ ಮತ್ತು ಸಾರಿಗೆ ಸಚಿವರು)–

ಅ) ಹೌದು.

ಆ) ಶ್ರೀಘ್ರದಲ್ಲಿಯೇ ಬಿಡುಗಡೆ ಮಾಡಲಾಗುವುದು.

3515 (4312) ಶ್ರೀಅರಗ ಜ್ಞಾನೇಂದ್ರ (ತೀರ್ಥಹಳ್ಳಿ)– ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದ ವಿವಿಧ ಇಲಾಖಾ ಕಛೇರಿಗಳ ಮೇಲೆ ತನಿಖಾ ಕಾರ್ಯವನ್ನು ಕೈಗೊಂಡಿರುವ ಲೋಕಾಯುಕ್ತ ದಾಳಿಗಳ ಸಂಖ್ಯೆ ಎಷ್ಟು ಜಿಲ್ಲಾವಾರು, ಇಲಾಖಾವಾರು ವಿವರ ನೀಡುವುದು);

ಆ) ಧಾರವಾಡದ ಜಿಲ್ಲೆಯಲ್ಲಿ ಇತ್ತೀಚೆಗೆ ನಡೆಸಿದಂತಹ ತನಿಖೆಯಲ್ಲಿ ತಾಲ್ಲೂಕು ಪಂಚಾಯ್ತಿ ಅವ್ಯವಹಾರ ಕುರಿತ ಹಗರಣದ ತನಿಖೆ ಯಾವ ಹಂತದಲ್ಲಿದೆ;

ಇ) ಇವರ ಮೇಲೆ ಕೈಗೊಂಡ ಕ್ರಮಗಳೇನು;

ಈ) ಲೋಕಾಯುಕ್ತ, ಉಪ ಲೋಕಾಯುಕ್ತ ಇವರುಗಳ ಕಾರ್ಯ ಜವಾಬ್ದಾರಿಗಳೇನು ;

ಉ) ಈ ಲೋಕಾಯುಕ್ತರ ವರದಿ ಮೇಲೆ ಸರ್ಕಾರ ಕ್ರಮ ಕೈಗೊಳ್ಳಲು ವಿಳಂಬ ನೀತಿ ಅನುಸರಿಸಲು ಕಾರಣಗಳೇನು;

ಶ್ರೀ ಧರ್ಮಸಿಂಗ್ (ಮುಖ್ಯಮಂತ್ರಿಗಳು)–

ಅ) ಲೋಕಾಯುಕ್ತರು ದಿನಾಂಕ:2.7.2001 ರಿಂದ ಈವರೆಗೆ ರಾಜ್ಯದ ವಿವಿಧ ಇಲಾಖೆಗಳಿಗೆ ಭೇಟಿ ಕೊಟ್ಟ ವಿವರಗಳನ್ನು ಲಗತ್ತಿಸಿರುವ ಅನುಬಂಧ–1 ರಲ್ಲಿ ನೀಡಲಾಗಿದೆ.